ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ದೂ: 080-22343901, 22343904

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು-560001.

**ಸಂಖ್ಯೆ:ಕಾಶಿಇ/ಶೈವಿ/22/ಸುತ್ತೋಲೆ/2018-19**

ದಿನಾಂಕ: 7.08.2018

**ಸುತ್ತೋಲೆ**

**ವಿಷಯ:** ರಾಜ್ಯದ ಎಲ್ಲಾ ಪದವಿ ಕಾಲೇಜುಗಳಲ್ಲಿ ದಿ ಭಾರತ್ ಸ್ಕೌಟ್ಸ್ & ಗೈಡ್ಸ್‌ನ ರೋವರ್/ರೇಂಜರ್ ಘಟಕಗಳನ್ನು ಕಡ್ಡಾಯವಾಗಿ ಪ್ರಾರಂಭಿಸುವ ಬಗ್ಗೆ.

**ಉಲ್ಲೇಖ:**
1. ಮಾನ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಸಭಾ ಸೂಚನಾ ಪತ್ರ ಸಂಖ್ಯೆ:ಮುಕಾ/784/2018, ದಿನಾಂಕ:26.07.2018.
2. ದಿನಾಂಕ:14.06.2012 ಮತ್ತು ದಿನಾಂಕ:15.01.2013 ರ ಈ ಕಛೇರಿಯ ಸುತ್ತೋಲೆ ಸಂಖ್ಯೆ:ಕಾಶಿಇ/ಶೈವಿ/145/ಪಠ್ಯೇತರ/2010-11.

********

ದಿ ಭಾರತ್ ಸ್ಕೌಟ್ಸ್ & ಗೈಡ್ಸ್, ಕರ್ನಾಟಕ ಇವರ ಅಂದೋಲನವು ಯುವ ಜನಾಂಗದಲ್ಲಿ ಶಿಸ್ತು ಮತ್ತು ಸೇವಾ ಮನೋಭಾವವನ್ನು ಪಾಲಿಸುವಲ್ಲಿ ಅತ್ಯುತ್ತಮ ಸೇವೆ ಸಲ್ಲಿಸುತ್ತಿರುವ ಹಿನ್ನಲೆಯಲ್ಲಿ ಈ ಇಲಾಖೆಯ ವ್ಯಾಪ್ತಿಗೆ ಬರುವ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಎನ್.ಎಸ್.ಎಸ್. ಹಾಗೂ ಎನ್.ಸಿ.ಸಿ. ಘಟಕಗಳ ಜೊತೆಗೆ ದಿ ಭಾರತ್ ಸ್ಕೌಟ್ಸ್ & ಗೈಡ್ಸ್‌ನ ರೋವರ್ & ರೇಂಜರ್ ಘಟಕಗಳನ್ನು ಪ್ರಾರಂಭಿಸಲು ಹಾಗೂ ಸದರಿ ಕಾರ್ಯಕ್ರಮದಡಿ ವಿದ್ಯಾರ್ಥಿಗಳಿಂದ ಸಂಗ್ರಹಿಸಲಾಗುವ ಶುಲ್ಕವನ್ನು ಪರಿಣಾಮಕಾರಿಯಾಗಿ ಉಪಯೋಗಿಸಿಕೊಳ್ಳುವ ಬಗ್ಗೆ ಈಗಾಗಲೇ ಉಲ್ಲೇಖ-(2) ರ ಈ ಕಛೇರಿಯ ಸುತ್ತೋಲೆಗಳಲ್ಲಿ ಸ್ಪಷ್ಟ ಮಾರ್ಗಸೂಚಿಗಳನ್ನು ಜಾರಿಗೊಳಿಸಲಾಗಿರುತ್ತದೆ. ಆದಾಗ್ಯೂ, ಕೆಲವೊಂದು ಕಾಲೇಜುಗಳಲ್ಲಿ ರೋವರ್ & ರೇಂಜರ್ ಘಟಕಗಳನ್ನು ಪ್ರಾರಂಭಿಸದೇ ಇರುವುದನ್ನು ಗಮನಿಸಲಾಗಿದ್ದು, ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಭಾರತ್ ಸ್ಕೌಟ್ಸ್ & ಗೈಡ್ಸ್‌ನ ರೋವರ್ & ರೇಂಜರ್ ಘಟಕಗಳನ್ನು ಪ್ರಾರಂಭಿಸಿ, ಉಲ್ಲೇಖ-(2) ರ ಈ ಕಛೇರಿಯ ಸುತ್ತೋಲೆಗಳಲ್ಲಿ (ಪ್ರತಿ ಲಗತ್ತಿಸಿದೆ) ನೀಡಿರುವ ಮಾರ್ಗಸೂಚಿಗಳನ್ವಯ ಕ್ರಮ ವಹಿಸುವಂತೆ ಪ್ರಾಂಶುಪಾಲರುಗಳಿಗೆ ಈ ಮೂಲಕ ಸೂಚಿಸಲಾಗಿದೆ.

ಆಯಾ ಪ್ರಾದೇಶಿಕ ಜಂಟಿ ನಿರ್ದೇಶಕರು ತಮ್ಮ ವ್ಯಾಪ್ತಿಗೆ ಬರುವ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪ್ರಥಮ ದರ್ಜೆ ಕಾಲೇಜುಗಳಲ್ಲಿ ದಿ ಭಾರತ್ ಸ್ಕೌಟ್ಸ್ & ಗೈಡ್ಸ್‌ನ ರೋವರ್ & ರೇಂಜರ್ ಘಟಕಗಳನ್ನು ಪ್ರಾರಂಭಿಸಿರುವ ಬಗ್ಗೆ ಪರಿಶೀಲಿಸಿ, ಪ್ರಾರಂಭಿಸದೇ ಇರುವ ಕಾಲೇಜುಗಳಲ್ಲಿ ಸದರಿ ಘಟಕಗಳನ್ನು ಪ್ರಾರಂಭಿಸಲು ಸೂಕ್ತ ಕ್ರಮಕೈಗೊಳ್ಳುವಂತೆ ಹಾಗೂ ಈ ಬಗ್ಗೆ ವರದಿ ನೀಡುವಂತೆ ಜಂಟಿ ನಿರ್ದೇಶಕರಿಗೆ ಸೂಚಿಸಲಾಗಿದೆ.

**ಕಾಲೇಜು ಶಿಕ್ಷಣ ಆಯುಕ್ತರು**

**ಇವರಿಗೆ:**

1. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ, ಬೆಂಗಳೂರು, ಮೈಸೂರು, ಶಿವಮೊಗ್ಗ, ಮಂಗಳೂರು, ಧಾರವಾಡ, ಗುಲಬರ್ಗಾ- ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
2. ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ-ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು-ಈ ಸುತ್ತೋಲೆಯನ್ನು ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸುವುದು.

**ಪ್ರತಿಯನ್ನು:**

1) ರಾಜ್ಯ ಕಾರ್ಯದರ್ಶಿ, ದಿ ಭಾರತ್ ಸ್ಕೌಟ್ಸ್ & ಗೈಡ್ಸ್, ಕರ್ನಾಟಕ, "ಶಾಂತಿ ಗೃಹ", ನಂ.39, ಅರಮನೆ ರಸ್ತೆ, ಬೆಂಗಳೂರು-01.
2) ಆಯುಕ್ತರ, ನಿರ್ದೇಶಕರ, ಹೆಚ್ಚುವರಿ ನಿರ್ದೇಶಕರ, ಮುಖ್ಯ ಆಡಳಿತಾಧಿಕಾರಿಗಳ, ಜಂಟಿ ನಿರ್ದೇಶಕರ ಆಪ್ತಶಾಖೆಗೆ, ಕೇಂದ್ರ ಕಛೇರಿ, ಬೆಂಗಳೂರು.
3) ಕಛೇರಿ ಪ್ರತಿ.